**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ಸೂರ್ಯ ಎಜುಕೇಷನಲ್ ಟ್ರಸ್ಟ್ (ರಿ) ಇವರ ಈಸ್ಟ್ ವೆಸ್ಟ್ ಇನ್ಸಿಟ್ಯೂಟ್ ಆಫ್ ಫಾರ್ಮಸ್ಯುಟಿಕಲ್ ಸೈನ್ಸಸ್, ಬೆಂಗಳೂರು ಇವರಿಗೆ ಹೊಸದಾಗಿ ಬಿ-ಫಾರ್ಮಸಿ ಕೋರ್ಸ್ ಪ್ರಾರಂಭಿಸಲು NOC ನೀಡುವ ಬಗ್ಗೆ.

**ಓದಲಾಗಿದೆ:**

1. ಕುಲಸಚಿವರು, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ ಇವರ ಪತ್ರ ಸಂಖ್ಯೆ: ACA/AFF/F/PH-235/2024-25, ದಿನಾಂಕ: 12.01.2024.
2. ಔಷಧ ನಿಯಂತ್ರಕರು, ಔಷಧ ನಿಯಂತ್ರಣ ಇಲಾಖೆ ಇವರ ವರದಿ ಸಂಖ್ಯೆ:ಔನಿಇ/100/ಯೋಜನೆ/2023-24, ದಿನಾಂಕ:02.04.2024.
2. ಉನ್ನತಾಧಿಕಾರಿ ಸಮಿತಿ ಸಭೆಯ ನಡವಳಿ ದಿನಾಂಕ: 20.07.2024 ಮತ್ತು 30.07.2024.

****

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರ.ಸಂ.(1)ರಲ್ಲಿ ಕುಲಸಚಿವರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ ಇವರು 2024-25ನೇ ಶೈಕ್ಷಣಿಕ ಸಾಲಿನಲ್ಲಿ ಸೂರ್ಯ ಎಜುಕೇಷನಲ್ ಟ್ರಸ್ಟ್ (ರಿ) ಇವರ ಈಸ್ಟ್ ವೆಸ್ಟ್ ಇನ್ಸಿಟ್ಯೂಟ್ ಆಫ್ ಫಾರ್ಮಸ್ಯುಟಿಕಲ್ ಸೈನ್ಸಸ್, ಬೆಂಗಳೂರು ಇವರಿಗೆ 60 ಸೀಟುಗಳ ಪ್ರವೇಶ ಮಿತಿಯಲ್ಲಿ ಹೊಸದಾಗಿ ಬಿ-ಫಾರ್ಮಸಿ ಕೋರ್ಸ್‌ನ್ನು ಪ್ರಾರಂಭಿಸಲು ಶಿಫಾರಸ್ಸು ಮಾಡಿರುತ್ತದೆ.

ಮೇಲೆ ಓದಲಾದ ಕ್ರ.ಸಂ.(2)ರ ಪತ್ರದಲ್ಲಿ ಔಷಧ ನಿಯಂತ್ರಕರು, ಔಷಧ ನಿಯಂತ್ರಣ ಇಲಾಖೆ, ಬೆಂಗಳೂರು ಇವರು ಪ್ರಾಂಶುಪಾಲರು ಸರ್ಕಾರಿ ಔಷಧ ವಿಜ್ಞಾನ ಮಹಾವಿದ್ಯಾಲಯ ಇವರು ನೀಡಿರುವ ವರದಿಯನ್ವಯ, ಸೂರ್ಯ ಎಜುಕೇಷನಲ್ ಟ್ರಸ್ಟ್ (ರಿ) ಇವರು ಈಸ್ಟ್ ವೆಸ್ಟ್ ಇನ್ಸಿಟ್ಯೂಟ್ ಆಫ್ ಫಾರ್ಮಸ್ಯುಟಿಕಲ್ ಸೈನ್ಸಸ್, ಬೆಂಗಳೂರು ಎಂಬ ಹೆಸರಿನಲ್ಲಿ ಹೊಸದಾಗಿ ಬಿ-ಫಾರ್ಮಸಿ ಕೋರ್ಸ್ ಪ್ರಾರಂಭಿಸಲು ಸಂಸ್ಥೆಯು ನಿಯಮಾನುಸಾರ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಹೊಂದಿದ್ದು, ಸದರಿ ವಿದ್ಯಾಸಂಸ್ಥೆಯು ನಿಯಮಾನುಸಾರ ಪ್ರವೇಶ ಪ್ರಕ್ರಿಯೆ ಆರಂಭಗೊಳ್ಳುವ ಮುನ್ನ ಪಿ.ಸಿ.ಐ. ರವರಿಂದ ಅನುಮತಿ ಪಡೆಯಬೇಕೆಂಬ ಷರತ್ತಿಗೊಳಪಟ್ಟು, 2024-25ನೇ ಶೈಕ್ಷಣಿಕ ಸಾಲಿನಿಂದ ಹೊಸದಾಗಿ ಬಿ-ಫಾರ್ಮಸಿ ಕೋರ್ಸ್‌ನ್ನು 60 ಸೀಟುಗಳಗಳಿಗೆ ಮಾತ್ರ ಪ್ರಾರಂಭಿಸಲು ನಿರಾಕ್ಷೇಪಣಾ ಪತ್ರ ನೀಡಬಹುದಾಗಿದೆ ಎಂದು ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ ಕ್ರ.ಸಂ.(3)ರಲ್ಲಿ ಓದಲಾದ ದಿನಾಂಕ: 20.07.2024 ಹಾಗೂ 30.07.2024 ರಂದು ನಡೆದ ಉನ್ನತ ಮಟ್ಟದ ಸಮಿತಿ ಸಭೆಯಲ್ಲಿ 2024-25ನೇ ಶೈಕ್ಷಣಿಕ ಸಾಲಿನಿಂದ ಸೂರ್ಯ ಎಜುಕೇಷನಲ್ ಟ್ರಸ್ಟ್ (ರಿ) ಇವರ ಈಸ್ಟ್ ವೆಸ್ಟ್ ಇನ್ಸಿಟ್ಯೂಟ್ ಆಫ್ ಫಾರ್ಮಸ್ಯುಟಿಕಲ್ ಸೈನ್ಸಸ್, ಬೆಂಗಳೂರು ಇವರಿಗೆ 60 ವಿದ್ಯಾರ್ಥಿಗಳ ಪ್ರವೇಶ ಮಿತಿಯಲ್ಲಿ ಹೊಸದಾಗಿ ಬಿ-ಫಾರ್ಮಸಿ ಕೋರ್ಸ್ ಪ್ರಾರಂಭಿಸಲು ನಿರಾಕ್ಷೇಪಣಾ ಪತ್ರ ನೀಡಬಹುದಾಗಿದೆ ಎಂದು ತೀರ್ಮಾನಿಸಲಾಗಿರುತ್ತದೆ.

...2

Scanned with OKEN Scanner

RGUHS ವರದಿ, ಔಷಧ ನಿಯಂತ್ರಕರ ವರದಿ ಹಾಗೂ ಲಭ್ಯವಿರುವ ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಿದ ಸರ್ಕಾರವು, 2024-25ನೇ ಶೈಕ್ಷಣಿಕ ಸಾಲಿನಿಂದ ಸೂರ್ಯ ಎಜುಕೇಷನಲ್ ಟ್ರಸ್ಟ್ (ರಿ) ಇವರ ಈಸ್ಟ್ ವೆಸ್ಟ್ ಇನ್ಸ್ಟಿಟ್ಯೂಟ್ ಆಫ್ ಫಾರ್ಮಸ್ಯುಟಿಕಲ್ ಸೈನ್ಸಸ್, Sy.No.187, ದೊಡ್ಡ ಆಲದಮರ ಮುಖ್ಯ ರಸ್ತೆ, ಕುಂಬಳಗೋಡು, ಕೆಂಗೇರಿ ಹೋಬಳಿ, ಬೆಂಗಳೂರು-560074 ಇವರಿಗೆ 60 ವಿದ್ಯಾರ್ಥಿಗಳ ಪ್ರವೇಶ ಮಿತಿಯಲ್ಲಿ ಹೊಸದಾಗಿ ಬಿ-ಫಾರ್ಮಸಿ ಕೋರ್ಸ್ ಪ್ರಾರಂಭಿಸಲು ನಿರಾಕ್ಷೇಪಣಾ ಪತ್ರ ನೀಡಲು ನಿರ್ಧರಿಸಿದೆ. ಆದುದರಿಂದ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಆಕುಕ 97 ಪಿಟಿಡಿ 2024,**
**ಬೆಂಗಳೂರು. ದಿನಾಂಕ:08.08.2024**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2024-25ನೇ ಶೈಕ್ಷಣಿಕ ಸಾಲಿನಿಂದ ಸೂರ್ಯ ಎಜುಕೇಷನಲ್ ಟ್ರಸ್ಟ್ (ರಿ) ಇವರು ಈಸ್ಟ್ ವೆಸ್ಟ್ ಇನ್ಸ್ಟಿಟ್ಯೂಟ್ ಆಫ್ ಫಾರ್ಮಸ್ಯುಟಿಕಲ್ ಸೈನ್ಸಸ್, ಎಂಬ ಹೆಸರಿನಲ್ಲಿ, Sy.No.187, ದೊಡ್ಡ ಆಲದಮರ ಮುಖ್ಯ ರಸ್ತೆ, ಕುಂಬಳಗೋಡು, ಕೆಂಗೇರಿ ಹೋಬಳಿ, ಬೆಂಗಳೂರು-560074 ಇವರಿಗೆ 60 ವಿದ್ಯಾರ್ಥಿಗಳ ಪ್ರವೇಶ ಮಿತಿಯಲ್ಲಿ ಹೊಸದಾಗಿ ಬಿ-ಫಾರ್ಮಸಿ ಕೋರ್ಸ್ ಪ್ರಾರಂಭಿಸಲು ಕೆಳಕಂಡ ಷರತ್ತಿಗೊಳಪಟ್ಟು ನಿರಾಕ್ಷೇಪಣಾ ಪತ್ರ ನೀಡಿದೆ.

**ಸದರಿ ಸಂಸ್ಥೆಯು ಈ ಕೆಳಕಂಡ ಷರತ್ತುಗಳನ್ನು ಪಾಲಿಸತಕ್ಕದ್ದು:-**

1. ಬಿ-ಫಾರ್ಮ ಕೋರ್ಸ್‌ನ್ನು ಪ್ರಾರಂಭಿಸುವ ಮುನ್ನ ಅಗತ್ಯವಿರುವ ಎಲ್ಲಾ ಮೂಲ ಸೌಲಭ್ಯಗಳು ಹಾಗೂ ಸಿಬ್ಬಂದಿಯನ್ನು ಹೊಂದಿರತಕ್ಕದ್ದು.
2. ಸರ್ಕಾರದ ಸೀಟುಗಳ ಹಂಚಿಕೆಯಲ್ಲಿ ಪ್ರವೇಶಾವಕಾಶಕ್ಕೆ ಹಾಲಿ ಜಾರಿಯಲ್ಲಿರುವ ನಿಯಮ/ಆದೇಶಗಳಿಗೆ ಸಂಸ್ಥೆಯು ಬದ್ಧವಾಗಿರಬೇಕು ಮತ್ತು ಸರ್ಕಾರಿ ಕೋಟಾ ಸೀಟುಗಳನ್ನು ಬಿಟ್ಟುಕೊಡತಕ್ಕದ್ದು.
3. RGUHS ಮತ್ತು PCI ನಿಗದಿಪಡಿಸಿರುವ ಪರಿನಿಯಮಾವಳಿಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.
4. ರಾಜ್ಯ/ಕೇಂದ್ರ ಸರ್ಕಾರವು ಕಾಲಕಾಲಕ್ಕೆ ನೀಡುವ ಸೂಚನೆ ಹಾಗೂ ಆದೇಶಗಳನ್ನು ಪಾಲಿಸತಕ್ಕದ್ದು.
5. ಈ ಕಾಲೇಜಿಗೆ ಕರ್ನಾಟಕ ಸರ್ಕಾರದ ವತಿಯಿಂದ ಯಾವುದೇ ರೀತಿಯ ಅನುದಾನ, ಆರ್ಥಿಕ ಸೌಲಭ್ಯಗಳನ್ನು ನೀಡಲಾಗುವುದಿಲ್ಲ. ಇದು ಶಾಶ್ವತ ಅನುದಾನ ರಹಿತ ಷರತ್ತಿಗೆ ಒಳಪಟ್ಟಿರುತ್ತದೆ.
6. ಸರ್ಕಾರ/ಪ್ರಾಧಿಕಾರದ ಪೂರ್ವಾನುಮತಿಯಿಲ್ಲದೆ, ಯಾವುದೇ ಕಾರಣಕ್ಕೂ ಕಾಲೇಜಿನ ಹೆಸರು ಮತ್ತು ವಿಳಾಸವನ್ನು ಬದಲಾಯಿಸುವಂತಿಲ್ಲ.
7. ಸರ್ಕಾರವು ಕಾಲಕಾಲಕ್ಕೆ ನಿಗದಿಪಡಿಸುವ ಕೋರ್ಸ್‌ನ ಶುಲ್ಕಗಳನ್ನು ಮಾತ್ರ ವಿದ್ಯಾರ್ಥಿಗಳಿಂದ ಪಡೆಯತಕ್ಕದ್ದು ಮತ್ತು ಸಕ್ಷಮ ಪ್ರಾಧಿಕಾರದಿಂದ ಮಂಜೂರಾದ ಸೀಟುಗಳಲ್ಲಿ ಕಾಲಕಾಲಕ್ಕೆ ಸರ್ಕಾರವು ನಿಗದಿಪಡಿಸುವ ಅನುಪಾತದಲ್ಲಿ ಸರ್ಕಾರಕ್ಕೆ ಸೀಟುಗಳನ್ನು ಬಿಟ್ಟುಕೊಡತಕ್ಕದ್ದು.

...3

Scanned with OKEN Scanner

8. ಸಂಸ್ಥೆಯ ಆರ್ಥಿಕ ಸ್ಥಿತಿಯನ್ನು ಔಷಧ ನಿಯಂತ್ರಕರು, ಔಷಧ ನಿಯಂತ್ರಣ ಇಲಾಖೆ, ಇವರು, ಖಚಿತಪಡಿಸಿಕೊಳ್ಳುವುದು.
9. ಸರ್ಕಾರ ವಿಧಿಸಿರುವ ಮೇಲ್ಕಂಡ ಯಾವುದೇ ಒಂದು ಷರತ್ತನ್ನು ಉಲ್ಲಂಘಿಸಿದಲ್ಲಿ ಸಂಯೋಜನೆ/ಮಂಜೂರಾತಿಯನ್ನು ಹಿಂತೆಗೆದುಕೊಳ್ಳಲಾಗುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ.

8/8/24
(ಎನ್. ಪುಷ್ಪ)
ಸರ್ಕಾರದ ಜಂಟಿ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ.

8/8/2024

**ಇವರಿಗೆ:-**

1. ಔಷಧ ನಿಯಂತ್ರಕರು, ಔಷಧ ನಿಯಂತ್ರಣ ಇಲಾಖೆ, ಅರಮನ ರಸ್ತೆ, ಬೆಂಗಳೂರು.
2. ಕುಲಸಚಿವರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, 4ನೇ ಬ್ಲಾಕ್, ಜಯನಗರ, ಬೆಂಗಳೂರು-41.
3. ಪ್ರಾಂಶುಪಾಲರು, ಸರ್ಕಾರಿ ವಿಜ್ಞಾನ ಔಷಧ ಮಹಾವಿದ್ಯಾಲಯ, ಪಿ.ಕಾಳಿಂಗ್ ರಾವ್ ರಸ್ತೆ, ಬೆಂಗಳೂರು.
4. ಪ್ರಾಂಶುಪಾಲರು, ಈಸ್ಟ್ ವೆಸ್ಟ್ ಇನ್ಸಿಟ್ಯೂಟ್ ಆಫ್ ಫಾರ್ಮಸ್ಯುಟಿಕಲ್ ಸೈನ್ಸಸ್, Sy.No.187, ದೊಡ್ಡ ಆಲದಮರ ಮುಖ್ಯ ರಸ್ತೆ, ಕುಂಬಳಗೋಡು, ಕೆಂಗೇರಿ ಹೋಬಳಿ, ಬೆಂಗಳೂರು-560074.
5. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

**ಪ್ರತಿ ಮಾಹಿತಿಗಾಗಿ:-**

1. ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
3. ಸರ್ಕಾರದ ಜಂಟಿ ಕಾರ್ಯದರ್ಶಿ-3, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಆಪ್ತ ಸಹಾಯಕರಿಗೆ, ವಿಕಾಸ ಸೌಧ, ಬೆಂಗಳೂರು.

Scanned with OKEN Scanner